**Akashvani : Bangalore**
**Regional Bulletin In Kannada**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**26.05.2026 / 14.30 hrs**

**<><*<><>*><>**

ಮುಖ್ಯಾಂಶಗಳು

**<><*<><>*><>**

**೧. ವಿಧಾನಪರಿಷತ್‌ನ ಏಳು ಸ್ಥಾನಗಳಿಗೆ ಚುನಾವಣಾ ವೇಳಾಪಟ್ಟಿ ಪ್ರಕಟ; ಜೂನ್ ೧೮ ರಂದು ಮತದಾನ**

**೨. ಹದಿಮೂರು ಲಕ್ಷ ೫೨ ಸಾವಿರದ ೯೮೭ ಕೋಟಿ ರೂಪಾಯಿ ವಾರ್ಷಿಕ ಸಾಲ ಯೋಜನೆ ಬಿಡುಗಡೆ ಮಾಡಲು ಬ್ಯಾಂಕರ್‌ಗಳ ಸಭೆ ನಿರ್ಧಾರ**

**೩. ನವದೆಹಲಿಯಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್, ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲ ಅವರೊಂದಿಗೆ ಮುಖ್ಯಮಂತ್ರಿ ಚರ್ಚೆ**

**೪. ನವದೆಹಲಿಯಲ್ಲಿ ಕಾವೇರಿ ನಿರ್ವಹಣಾ ಪ್ರಾಧಿಕಾರದ ೫೧ನೇ ಸಭೆ; ಮೇಕೆದಾಟು ಅಣೆಕಟ್ಟು ಯೋಜನೆ ಬಗ್ಗೆ ಚರ್ಚೆ**

**೫. ನದಿಗೆ ಸಂಸ್ಕರಿಸದ ತ್ಯಾಜ್ಯ ಹರಿಸಿದರೆ ಕ್ರಿಮಿನಲ್ ಮೊಕದ್ದಮೆ - ಅರಣ್ಯ ಸಚಿವ ಈಶ್ವರ್ ಖಂಡ್ರೆ ಎಚ್ಚರಿಕೆ**

**<><*<><>*><>**

ರಾಜ್ಯಸಭಾ ಚುನಾವಣೆಯ ದಿನಾಂಕ ಘೋಷಣೆ ಬೆನ್ನಲ್ಲೇ ವಿಧಾನಪರಿಷತ್ ಚುನಾವಣೆಗೆ ದಿನಾಂಕ ಪ್ರಕಟಗೊಂಡಿದೆ. ಜೂನ್ ೨೬ ರಂದು ತೆರವಾಗಲಿರುವ ಪರಿಷತ್‌ನ ಏಳು ಸ್ಥಾನಗಳಿಗೆ ಜೂನ್ ೧೮ ರಂದು ಚುನಾವಣೆ ನಡೆಯಲಿದೆ. ಕಾಂಗ್ರೆಸ್‌ನ ಮೂರು, ಬಿಜೆಪಿಯ ಮೂರು, ಜೆಡಿಎಸ್‌ನ ಒಂದು ಸದಸ್ಯರ ಅವಧಿ ಜೂನ್‌ನಲ್ಲಿ ಮುಕ್ತಾಯಗೊಳ್ಳಲಿದೆ. ಜೂನ್ ೧ ರಂದು ಅಧಿಸೂಚನೆ ಪ್ರಕಟಗೊಳ್ಳಲಿದ್ದು, ನಾಮಪತ್ರ ಸಲ್ಲಿಕೆಗೆ ಜೂನ್ ೮ ಕೊನೆಯ ದಿನವಾಗಿದೆ. ಜೂನ್ ೯ ರಂದು ನಾಮಪತ್ರ ಪರಿಶೀಲನೆ ನಡೆಯಲಿದ್ದು, ನಾಮಪತ್ರ ಹಿಂಪಡೆಯಲು ಜೂನ್ ೧೧ ರಂದು ಕೊನೆಯ ದಿನವಾಗಿದೆ. ಮತದಾನ ಜೂನ್ ೧೮ ರಂದು ನಡೆಯಲಿದ್ದು, ಅಂದೇ ಫಲಿತಾಂಶ ಪ್ರಕಟಗೊಳ್ಳಲಿದೆ. ಬಿ.ಕೆ.ಹರಿಪ್ರಸಾದ್, ನಾಸೀರ್ ಅಹಮದ್, ತಿಪ್ಪಣ್ಣ, ಪ್ರತಾಪ್ ಸಿಂಹ ನಾಯಕ್,

ಎನ್.ನಾಗರಾಜು, ಸುನೀಲ್ ವಲ್ಯಾಪುರೆ ಮತ್ತು ಗೋವಿಂದರಾಜು ಅವರ ಅಧಿಕಾರವಧಿ ಜೂನ್‌ನಲ್ಲಿ ಮುಕ್ತಾಯಗೊಳ್ಳಲಿದೆ.

**<><*<><>*><>**

ವಿಧಾನಸೌಧದಲ್ಲಿಂದು ೧೭೫ನೇ ರಾಜ್ಯಮಟ್ಟದ ಬ್ಯಾಂಕರ್‌ಗಳ ಸಮಿತಿ ಸಭೆ ನಡೆಯಿತು. ಸಭೆಯಲ್ಲಿ ಒಟ್ಟು ೧೩ ಲಕ್ಷದ ೫೨ ಸಾವಿರದ ೯೮೭ ಕೋಟಿ ರೂಪಾಯಿ ಮೊತ್ತದ ರಾಜ್ಯ ವಾರ್ಷಿಕ ಸಾಲ ಯೋಜನೆಯನ್ನು ಬಿಡುಗಡೆ ಮಾಡಲು ನಿರ್ಧರಿಸಲಾಯಿತು. ಆದ್ಯತಾ ವಲಯಕ್ಕೆ ೫ ಲಕ್ಷ ೩ ಸಾವಿರದ ೨೬೪ ಕೋಟಿ ರೂಪಾಯಿ, ಕೃಷಿ ವಲಯಕ್ಕೆ ೨ ಲಕ್ಷ ೫೦ ಸಾವಿರದ ೫೪೮ ಕೋಟಿ ರೂಪಾಯಿ ಎಮ್‌ಎಸ್‌ಎಮ್‌ಇ ವಲಯಕ್ಕೆ, ೨ ಲಕ್ಷ ೨೭ ಸಾವಿರದ ೨೦೮ ಕೋಟಿ ರೂಪಾಯಿ ಶಿಕ್ಷಣಕ್ಕೆ, ೨ ಸಾವಿರದ ೫೨೮ ಕೋಟಿ ರೂಪಾಯಿ ಆದ್ಯತಾ ವಸತಿ ಯೋಜನೆಗೆ, ೯ ಸಾವಿರದ ೪೬೫ ಕೋಟಿ ರೂಪಾಯಿ ಹಂಚಿಕೆ ಮಾಡಲು ನಿರ್ಧರಿಸಲಾಗಿದೆ. ಸಭೆಯ ಅಧ್ಯಕ್ಷತೆ ವಹಿಸಿದ್ದ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರು ಎಲ್ಲಾ ಬ್ಯಾಂಕರ್‌ಗಳಿಗೆ ತಕ್ಷಣವೇ ಪ್ರತೀ ಗ್ರಾಮಪಂಚಾಯಿತಿಗೆ ಒಬ್ಬ ಬಿ.ಸಿ.ಸಖಿಯನ್ನು ಹಾಗೂ ದೀರ್ಘಾವಧಿಯಲ್ಲಿ ಪ್ರತಿ ಗ್ರಾಮಕ್ಕೆ ಒಬ್ಬ ಬಿ.ಸಿ.ಸಖಿ ಖಚಿತಪಡಿಸುವಂತೆ ತಿಳಿಸಿದ್ದಾರೆ. ಮನೆ ಇಲ್ಲದವರಿಗೆ ಆಶ್ರಯ ಒದಗಿಸಲು ಗೃಹ ಸಾಲಗಳನ್ನು ಆದ್ಯತೆಯ ಮೇರೆಗೆ ಮಂಜೂರು ಮಾಡುವಂತೆ ಸೂಚಿಸಿದ್ದಾರೆ.

**<><*<><>*><>**

ನವದೆಹಲಿ ಪ್ರವಾಸದಲ್ಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಎಐಸಿಸಿ ಕಚೇರಿಯ ಇಂದಿರಾ ಭವನದಲ್ಲಿಂದು ಮಹತ್ವದ ಚರ್ಚೆ ನಡೆಸಿದ್ದಾರೆ. ಇದಕ್ಕೂ ಮೊದಲು ಮುಖ್ಯಮಂತ್ರಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಹಾಗೂ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲ ಅವರೊಂದಿಗೆ ಮಾತುಕತೆ ನಡೆಸಿದ್ದಾರೆ ಎಂದು ಮುಖ್ಯಮಂತ್ರಿ ಕಚೇರಿ ತಿಳಿಸಿದೆ. ಹೈಕಮಾಂಡ್ ಜೊತೆಗಿನ ಇಂದಿನ ಸಭೆಯಲ್ಲಿ ಪ್ರಮುಖವಾಗಿ ರಾಜ್ಯಸಭಾ ಚುನಾವಣೆ, ವಿಧಾನಪರಿಷತ್ ಚುನಾವಣೆ ಹಾಗೂ ರಾಜ್ಯದಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕುರಿತಂತೆ ಪ್ರಮುಖವಾಗಿ ಚರ್ಚೆ ನಡೆಯಲಿದೆ.

**<><*<><>*><>**

ರಾಜ್ಯಸಭಾ ಮತ್ತು ವಿಧಾನಪರಿಷತ್ ಚುನಾವಣೆ ಹಾಗೂ ಸಂಪುಟ ಪುನರ್‌ರಚನೆ ಬೇಡಿಕೆ, ಪಕ್ಷ ಬಲವರ್ಧನೆ ಕುರಿತಂತೆ ಇಂದು ಹೈಕಮಾಂಡ್ ಜೊತೆ ಪ್ರಮುಖವಾಗಿ ಚರ್ಚೆ ನಡೆಯಲಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ನವದೆಹಲಿಯಲ್ಲಿ

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಯಕತ್ವ ಬದಲಾವಣೆಯ ಸಾಧ್ಯತೆಯನ್ನು ತಳ್ಳಿಹಾಕಿದ್ದಾರೆ. ಪ್ರಮುಖವಾಗಿ ಕೇಂದ್ರ ಸರ್ಕಾರದ ವಿರುದ್ಧ ರಾಜಕೀಯ ಹೋರಾಟ ನಡೆಸುವ ಸಿದ್ಧತೆ ಹಾಗೂ ಇತರೆ  ಹಲವಾರು ವಿಷಯಗಳ ಬಗ್ಗೆ ಚರ್ಚೆ ನಡೆಯಲಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಕಾವೇರಿ ನಿರ್ವಹಣಾ ಪ್ರಾಧಿಕಾರದ ೫೧ನೇ ಸಭೆ ನವದೆಹಲಿಯಲ್ಲಿ ಇಂದು ನಡೆಯಲಿದೆ. ಕಾವೇರಿ ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷ ಎಸ್.ಕೆ.ಹಲ್ದಾರ್ ಅಧ್ಯಕ್ಷತೆಯಲ್ಲಿ ನಡೆಯುವ ಸಭೆಯಲ್ಲಿ ಪ್ರಮುಖವಾಗಿ ಮೇಕೆದಾಟು ಅಣೆಕಟ್ಟು ಯೋಜನೆ ಬಗ್ಗೆ ಚರ್ಚೆ ನಡೆಯಲಿದೆ. ಸಭೆಯಲ್ಲಿ ತಮಿಳುನಾಡು, ಕೇರಳಂ, ಕರ್ನಾಟಕ, ಪುದುಚೇರಿ ರಾಜ್ಯಗಳ ನಡುವೆ ಕಾವೇರಿ ನದಿ ನೀರು ಹಂಚಿಕೆ ಕುರಿತಂತೆ ಚರ್ಚೆ ನಡೆಯಲಿದೆ. ಕುರುವೈ ಕೃಷಿ ಋತುವಿಗೆ ಮುಂಚಿತವಾಗಿ ತಮಿಳುನಾಡಿನ ರೈತರು ನೀರಿನ ಲಭ್ಯತೆಯ ಬಗ್ಗೆ ಕಳವಳ ವ್ಯಕ್ತಪಡಿಸಿರುವುದರಿಂದ ಈ ಸಭೆ ಮಹತ್ವದ್ದಾಗಿದೆ. ಭತ್ತದ ಕೃಷಿ ಋತುವಿಗೆ ತಮಿಳುನಾಡು ಸಾಂಪ್ರದಾಯಿಕವಾಗಿ ನೀರು ಬಿಡುಗಡೆ ಮಾಡುವಂತೆ ಒತ್ತಾಯಿಸುವುದರಿಂದ ಈ ಸಭೆ ಮಹತ್ವ ಪಡೆದುಕೊಂಡಿದೆ. ಸುಪ್ರೀಂಕೋರ್ಟ್ ನಿರ್ದೇಶನದ ಅನುಸಾರ ಕೇಂದ್ರ ಸರ್ಕಾರ ಕಾವೇರಿ ನಿರ್ವಹಣಾ ಪ್ರಾಧಿಕಾರ ಮತ್ತು ನೀರು ನಿಯಂತ್ರಣಾ ಸಮಿತಿಯನ್ನು  ರಚಿಸಿದೆ.

**<><*<><>*><>**

ಮುಂಬರುವ ರಾಜ್ಯಸಭಾ ಚುನಾವಣೆಯ ಬಗ್ಗೆ ವರಿಷ್ಠರೊಂದಿಗೆ ಚರ್ಚಿಸಲು ಮುಖ್ಯಮಂತ್ರಿಗಳು ಹಾಗೂ ನಾಯಕರು ದೆಹಲಿಗೆ ತೆರಳಿದ್ದಾರೆ ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ತಿಳಿಸಿದ್ದಾರೆ. ಕುಕ್ಕೆ ಸುಬ್ರಹ್ಮಣ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಸ್ಕರಿಸದೆ ನದಿಗೆ ತ್ಯಾಜ್ಯ ಹರಿಸಿದರೆ, ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಮಾನವ ವನ್ಯಜೀವಿ ಸಂಘರ್ಷ ನಿಯಂತ್ರಣಕ್ಕೆ ಕ್ರಮಕೈಗೊಳ್ಳುವುದಾಗಿ ತಿಳಿಸಿದ ಅವರು, ವನ್ಯಜೀವಿಗಳ ಸಂಚಾರದ ಬಗ್ಗೆ ನಿಗಾ ಇಡಲು ಡ್ರೋಣ್ ಸೇರಿದಂತೆ ಅತ್ಯಾಧುನಿಕ ಉಪಕರಣಗಳನ್ನು ಬಳಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

**<><*<><>*><>**

ಓಕಳೀಪುರಂ ಅಷ್ಟಪಥ ಕಾರಿಡಾರ್‌ನ ಚೆನ್ನೈ ರೈಲ್ವೆ ಕೆಳಭಾಗದಲ್ಲಿ ಬಾಕಿ ಇರುವ ಕಾಮಗಾರಿಗಳನ್ನು ೨೫ ದಿನಗಳಲ್ಲಿ ಪೂರ್ಣಗೊಳಿಸುವಂತೆ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬೆಂಗಳೂರು ಕೇಂದ್ರ ನಗರ ಪಾಲಿಕೆ ಹಾಗೂ ಪಶ್ಚಿಮ

ನಗರ ಪಾಲಿಕೆ ವ್ಯಾಪ್ತಿಯ ವಿವಿಧ ಅಭಿವೃದ್ಧಿ ಕಾಮಗಾರಿಗಳ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ ಮಾತನಾಡಿದ ಅವರು, ಈ ಸೂಚನೆ ನೀಡಿದ್ದಾರೆ. ಪಾದಚಾರಿ ಮಾರ್ಗದ ಕಾಮಗಾರಿಗಳನ್ನು ಕೂಡಲೇ ಆರಂಭಿಸಿ ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸುವಂತೆ ನಿರ್ದೇಶನ ನೀಡಿದ್ದಾರೆ. ಶಿವಾನಂದ ವೃತ್ತದ ಸಮೀಪದ ಮಾದವನಗರ ರೈಲ್ವೆ ಕೆಳಸೇತುವೆ ಬಳಿ ಪರಿಶೀಲನೆ ನಡೆಸಿದ ವೇಳೆ, ಮಳೆನೀರು ಹರಿವಿಗಾಗಿ ಅಳವಡಿಸಲಾಗಿರುವ ಗ್ರೇಟಿಂಗ್‌ಗಳನ್ನು ಸದಾ ಸ್ವಚ್ಛವಾಗಿರಿಸುವಂತೆ ತಿಳಿಸಿದ್ದಾರೆ.

<><*<><>*><>

ಕೇಂದ್ರ ಬುಡಕಟ್ಟು ವ್ಯವಹಾರಗಳ ಮಂತ್ರಾಲಯದ ಸೂಚನೆಯಂತೆ  ಶಿವಮೊಗ್ಗ ಜಿಲ್ಲೆಯ ಆಯ್ದ ಗ್ರಾಮಗಳಲ್ಲಿ ಹಮ್ಮಿಕೊಳ್ಳಲಾಗಿದ್ದ ಪಿಎಂ-ಜನ್ ಮನ್ ಹಾಗೂ ಡಿಎ-ಜೆಜಿಯುಎ ಯೋಜನೆಗಳಡಿಯ "ಜನ್ ಭಾಗೀದಾರಿ ಎಲ್ಲರಿಗಿಂತ ದೂರ, ಎಲ್ಲರಿಗಿಂತ ಮೊದಲು" ಮಾಹಿತಿ, ಶಿಕ್ಷಣ ಮತ್ತು ಸಂವಹನ ಅಭಿಯಾನ, ಯಶಸ್ವಿಯಾಗಿ ಮುಕ್ತಾಯಗೊಂಡಿದೆ ಎಂದು ಜಿಲ್ಲಾಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿ ಎನ್.ಹೇಮಂತ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಜಿಲ್ಲೆಯ ವಿರುಪಿನಕೊಪ್ಪ ಹಾಗೂ ಸದಾಶಿವಪುರ ಗ್ರಾಮಗಳಲ್ಲಿ ಈ ಅಭಿಯಾನವನ್ನು ಸಕ್ರಿಯವಾಗಿ ನಡೆಸಲಾಗಿತ್ತು. ಅಭಿಯಾನದ ಅಂಗವಾಗಿ ಬುಡಕಟ್ಟು ಸಮುದಾಯದ ಜನರಿಗಾಗಿ ವಿಶೇಷ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿತ್ತು.

<><*<><>*><>

ಕೇಂದ್ರ ವಿದೇಶಾಂಗ ಸಚಿವಾಲಯದ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಾಂಸ್ಕೃತಿಕ ರಾಜತಾಂತ್ರಿಕ ಸಂಸ್ಥೆಯಾದ ಐಸಿಸಿಆರ್ ಹಾಗೂ ರಾಜ್ಯ ಸರ್ಕಾರದ ಕನ್ನಡ ಸಂಸ್ಕೃತಿ ಇಲಾಖೆಯ ನಡುವೆ ನವದೆಹಲಿಯಲ್ಲಿ ಐತಿಹಾಸಿಕ ಒಡಂಬಡಿಕೆ ಮಾಡಿಕೊಳ್ಳಲಾಗಿದೆ. ಕರ್ನಾಟಕ ರಾಜ್ಯ ಮತ್ತು ಐಸಿಸಿಆರ್ ನಡುವಿನ ಪಾಲುದಾರಿಕೆಯನ್ನು ಹೆಚ್ಚು ಅರ್ಥಪೂರ್ಣವಾಗಿಸುವ, ಸಕ್ರಿಯವಾಗಿ ಭಾಗವಹಿಸಲು, ಹೆಚ್ಚಿನ ಪ್ರಯೋಜನಗಳನ್ನು ಪರಿಚಯಿಸುವುದು, ಈ ಒಪ್ಪಂದದ ಉದ್ದೇಶವಾಗಿದೆ. ವಿದೇಶಗಳಲ್ಲಿ ಸಾಂಸ್ಕೃತಿಕ ರಾಜತಾಂತ್ರಿಕ ಆದೇಶಗಳನ್ನು ಪೂರೈಸುವಲ್ಲಿ ಹಾಗೂ ಐಸಿಸಿಆರ್ ಅನ್ನು ಬಲಪಡಿಸಲು ಇದು ಸಹಾಯಕವಾಗಲಿದೆ.

<><*<><>*><>

ಗ್ಯಾರಂಟಿ ಯೋಜನೆಗಳು ಕಾಂಗ್ರೆಸ್ ಪಕ್ಷದ ರಾಜಕೀಯ ಗಿಮಿಕ್ ಮಾತ್ರವೇ ಹೊರತು ಬಡವರ ಬದುಕಿನ ಬಗ್ಗೆ ಇರುವ ನಿಜವಾದ ಕಾಳಜಿಯಲ್ಲ ಎಂದು ಮತ್ತೊಮ್ಮೆ ಜಗಜ್ಜಾಹೀರಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್

ಮಾಡಿರುವ ಅವರು, ಸರ್ಕಾರ ಈಗ ಏಕಾಏಕಿ ಫಲಾನುಭವಿಗಳ ಮರುಪರಿಶೀಲನೆ, ಮರು ನೋಂದಣಿ, ವಿಶೇಷ ಅಭಿಯಾನ ಎಂಬ ಹೊಸ ನಾಟಕ ಆರಂಭಿಸಿದೆ ಎಂದು ದೂರಿದ್ದಾರೆ. ಜಿಬಿಎ, ಸ್ಥಳೀಯ ಸಂಸ್ಥೆ ಚುನಾವಣೆ ನಂತರವೂ ಈ ಗ್ಯಾರಂಟಿ ಯೋಜನೆಗಳು ಇರಲಿದೆಯೇ ಎಂದು ಆರ್.ಅಶೋಕ ಪ್ರಶ್ನಿಸಿದ್ದಾರೆ.

**<><*<><>*><>**

ಬೆಳಗಾವಿ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಇಂದು ಕನ್ನಡದ ಅತೀ ಪ್ರಾಚೀನ ಹಲ್ಮಿಡಿ ಶಾಸನದ ಪ್ರತಿಕೃತಿಗೆ ಐದು ನದಿಗಳ ಜಲ ಹಾಗೂ ಕ್ಷೀರಾಭಿಷೇಕ ನಡೆಸಲಾಯಿತು. ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಕನ್ನಡಪರ ಹೋರಾಟಗಾರರಾದ ವಾಟಾಳ್ ನಾಗರಾಜ್, ಸಾ.ರಾ.ಗೋವಿಂದು, ಅಶೋಕ ಚಂದರಗಿ ಮೊದಲಾದ ಮುಖಂಡರು ಪಾಲ್ಗೊಂಡಿದ್ದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ, ವಾಟಾಳ್ ನಾಗರಾಜ್, ಗಡಿ ವಿಷಯದ ಮಹಾಜನ್ ವರದಿ ಅಂತಿಮ ಹಾಗೂ ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗವೆಂದು ಎಂದು ಬೆಳಗಾವಿ ಮಹಾನಗರ ಪಾಲಿಕೆ ನಿರ್ಣಯ ತೆಗೆದುಕೊಳ್ಳಬೇಕು ಎಂದು ಆಗ್ರಹಿಸಿದ್ದಾರೆ. ಜೂನ್ ೪ರೊಳಗೆ ನಿರ್ಣಯ ಅಂಗೀಕಾರವಾದಿದ್ದರೆ ಬೆಂಗಳೂರಿನಲ್ಲಿ ಕನ್ನಡಪರ ಸಂಘಟನೆಗಳಿಂದ ಕ್ರಾಂತಿಕಾರಕ ಹೋರಾಟ ನಡೆಸುವ ಮತ್ತು ಕರ್ನಾಟಕ ಬಂದ್ ಮಾಡುವ ನಿರ್ಣಯ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಬಳಿಕ ನಿರ್ಣಯ ಅಂಗೀಕಾರಕ್ಕೆ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**